ನಿರ್ವಹಣೆಗಾಗಿ ಅನುದಾನ ಒದಗಿಸಿದ್ದು, ಸದರಿ ಅನುದಾನವನ್ನು ದುರಸ್ಥಿಗಾಗಿ ವಿನಿಯೋಗಿಸಲಾಗುವುದು.

(ಆ) ಹೌದು. ತೇರದಾಳ ಕ್ಷೇತ್ರ ವ್ಯಾಪ್ತಿಯಲ್ಲಿ 15 ಕೇಂದ್ರಗಳು ಗುಡಿಸಲು/ತಾತ್ಕಾಲಿಕ ವ್ಯವಸ್ಥೆಯಡಿ ನಡೆಯುತ್ತಿವೆ. 169 ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ನಿರ್ಮಿಸಬೇಕಾಗಿರುತ್ತದೆ. ಇದರಲ್ಲಿ 116 ಕಟ್ಟಡಗಳು ನಗರ ಸಭೆ, ಪುರಸಭೆ ವ್ಯಾಪ್ತಿಗೆ ಬರುತ್ತಿದ್ದು, ನಿವೇಶನ ಪಡೆಯಲು ಪ್ರಯತ್ನಿಸಲಾಗುತ್ತಿದೆ. ಸ್ವಂತ ಕಟ್ಟಡಗಳಿಲ್ಲದೇ ಇರುವ ಅಂಗನವಾಡಿ ಕೇಂದ್ರಗಳಿಗೆ ವಿವಿಧ ಯೋಜನೆಗಳಡಿಯಲ್ಲಿ ಅನುದಾನ ಲಭ್ಯತೆ ಮತ್ತು ನಿವೇಶನ ಲಭ್ಯತೆಗನುಗುಣವಾಗಿ ಹಂತಹಂತವಾಗಿ ಕಟ್ಟಡಗಳನ್ನು ಮಂಜೂರು ಮಾಡಲಾಗುವುದು.

(ಇ) ಹೌದು. ಆರ್.ಐ.ಡಿ.ಎಫ್ ರಡಿಯಲ್ಲಿ 2011–12ನೇ ಸಾಲಿನಲ್ಲಿ ರಾಜ್ಯದಾದ್ಯಂತ 190 ಅಂಗನವಾಡಿ ಕಟ್ಟಡಗಳನ್ನು ನಿರ್ಮಿಸಲು ನಬಾರ್ಡ್ ಅನುಮೋದನೆಗಾಗಿ ಸಲ್ಲಿಸಲಾಗಿದೆ. ಈ ಪ್ರಸ್ತಾವನೆಯಲ್ಲಿ ತೇರದಾಳ ಕ್ಷೇತ್ರದಲ್ಲಿ 10 ಕಟ್ಟಡಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

ಕಟ್ಟಡಗಳಿಲ್ಲದೇ ಇರುವ ಕೇಂದ್ರಗಳಿಗೆ, ಅನುದಾನ ಲಭ್ಯತೆ ಮತ್ತು ನಿವೇಶನ ಲಭ್ಯತೆಗನುಗುಣವಾಗಿ ಹಂತಹಂತವಾಗಿ ಕಟ್ಟಡಗಳನ್ನು ಮಂಜೂರು ಮಾಡಲಾಗುವುದು.

(ಈ) 2011–12 ನೇ ಸಾಲಿನಲ್ಲಿ ಹೊಸ ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಯಾಗಿರುವುದಿಲ್ಲ. ಜಿಲ್ಲಾವಲಯದ ಇಲಾಖಾ ಅನುದಾನದಡಿಯಲ್ಲಿ ರೂ. 3.50 ಲಕ್ಷಗಳನ್ನು ಬಿಡುಗಡೆ ಮಾಡಿದ್ದು, ತೇರದಾಳ ಕ್ಷೇತ್ರದ 4 ಅಂಗನವಾಡಿ ಕಟ್ಟಡಗಳ ದುರಸ್ಥಿಗೆ ವಿನಿಯೋಗಿಸಲಾಗುವುದು.

ರೈತರ ಕೃಷಿ ಪಂಪ್ ಸೆಟ್‌ಗಳಿಗೆ ಸಂಬಂಧಿಸಿದ ಟಿ.ಸಿ.ಗಳನ್ನು ನೀಡಲು ಇಲಾಖೆಯಿಂದ ಆಗುತ್ತಿರುವ ವಿಳಂಬ

229 (521) ಶ್ರೀ ಸುರೇಶ್ ಬಾಬು ಸಿ,ಬಿ,(ಚಿಕ್ಕನಾಯಕನ ಹಳ್ಳಿ) :– ಮಾನ್ಯ ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ನೀರಾವರಿ ಸೌಲಭ್ಯವಿಲ್ಲದ ಕಡೆಗಳಲ್ಲಿ ರೈತರ ಕೃಷಿಗೆ ವಿದ್ಯುತ್ ಪಂಪ್‌ಸೆಟ್‌ಗಳ ಮೇಲೆ ಅವಲಂಬಿತರಾಗಿದ್ದು, ವಿದ್ಯುತ್ ಸರಬರಾಜು ಮಾಡುವ ಟಿ.ಸಿ.ಗಳು ವಿವಿಧ ಕಾರಣಗಳಿಂದ ಪದೇ ಪದೇ ಸುಟ್ಟು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರೀತಿ ಸುಟ್ಟು ಹೋಗುವ ಟಿ.ಸಿ.ಗಳನ್ನು ಬದಲಾಯಿಸಲು ಅಥವಾ ದುರಸ್ಥಿಗೊಳಿಸಲು ಇಲಾಖೆಯವರು ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಚಿಕ್ಕನಾಯಕನಹಳ್ಳಿ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬೇಡಿಕೆ ಇರುವ ರೈತರ ಕೃಷಿ ಪಂಪ್ ಸೆಟ್ ಗಳಿಗೆ ಬೇಕಾಗುವ ಟಿ.ಸಿಗಳೆಷ್ಟು; ಇದುವರೆಗೆ ಒದಗಿಸಲಾಗಿರುವ ಟಿ.ಸಿ.ಗಳೆಷ್ಟು ಉಳಿಕೆ ಇರುವ ಟಿ.ಸಿಗಳನ್ನು ಇನ್ನೆಷ್ಟು ದಿನಗಳಲ್ಲಿ ಒದಗಿಸಲಾಗುವುದು?

ಶೋಭಾ ಕರಂದ್ಲಾಜೆ: (ಇಂಧನ ಸಚಿವರು)

(ಅ) ನೀರಾವರಿ ಪಂಪುಸೆಟ್ಟುಗಳಿಗೆ ವಿದ್ಯುತ್ ಸರಬರಾಜು ಮಾಡುವ ವಿತರಣಾ ಟ್ರಾನ್ಸ್ ಫಾರ್ಮರ್‌ಗಳ ಮೇಲೆ ಆಗುವ ಓವರ್ ಲೋಡ್ ಮುಂತಾದ ಕಾರಣಗಳಿಂದ ಕೆಲವೊಮ್ಮೆ ವಿತರಣಾ ಟ್ರಾನ್ಸ್ ಫಾರ್ಮರ್‌ಗಳು ವಿಫಲವಾಗುತ್ತಿರುವುದು ಗಮನಕ್ಕೆ ಬಂದಿರುತ್ತದೆ.

(ಆ) ಈ ರೀತಿ ವಿಫಲಗೊಳ್ಳುವ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ಆದ್ಯತೆಯ ಮೇರೆಗೆ ಬದಲಾಯಿಸಲಾಗುತ್ತಿದೆ. ವಿಫಲಗೊಳ್ಳುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಾಯಿಸುವಲ್ಲಿ ಯಾವುದೇ ವಿಳಂಬ ನೀತಿ ಅನುಸರಿಸುತ್ತಿಲ್ಲ. ವಿಫಲಗೊಳ್ಳುವ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ದುರಸ್ತಿಗೊಳಿಸಲು ರಾಜ್ಯಾದ್ಯಂತ ಒಟ್ಟು 61 ಟ್ರಾನ್ಸ್ ಫಾರ್ಮರ್ ದುರಸ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಪ್ರಸಕ್ತ ಸಾಲಿನಲ್ಲಿ (2011–12) ಅಕ್ಟೋಬರ್ 2011ರ ಅಂತ್ಯದವರೆಗೆ, ಈ ಟ್ರಾನ್ಸ್ ಫಾರ್ಮರ್ ದುರಸ್ತಿ ಕೇಂದ್ರಗಳಿಂದ ಒಟ್ಟು 23,482 ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ದುರಸ್ತಿಗೊಳಿಸಲಾಗಿರುತ್ತದೆ. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ವ್ಯಪ್ತಿಯಲ್ಲಿ ಒಟ್ಟು 11 ಟ್ರಾನ್ಸ್ ಫಾರ್ಮರ್ ದುರಸ್ತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರಸಕ್ತ ಸಾಲಿನಲ್ಲಿ (2011–12) ಅಕ್ಟೋಬರ್–2011ರ ಅಂತ್ಯದವರೆಗೆ ಒಟ್ಟು 5,853 ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ದುರಸ್ತಿಗೊಳಿಸಲಾಗಿರುತ್ತದೆ. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ವ್ಯಾಪ್ತಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳನ್ನು ಹೊರತುಪಡಿಸಿ ಬೇರ ಬೇರೆ ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳಿಂದ ವಿಫಲಗೊಂಡ ವಿತರಣಾ ಟ್ರಾನ್ಸ್ ಫಾರ್ಮರ್‌ಗಳನ್ನು ಹೆಚ್ಚುವರಿಯಾಗಿ ದುರಸ್ತಿಗೊಳಿಸಲಾಗುತ್ತಿದೆ.

(ಇ) ಚಿಕ್ಕನಾಯಕನಹಳ್ಳಿ ವಿಧಾನ ಸಭಾಕೇತ್ರದ ವ್ಯಾಪ್ತಿಯಲ್ಲಿ ಏಪ್ರಿಲ್ 2011 ರಿಂದ ನವೆಂಬರ್ 2011ರ ಅವಧಿಯಲ್ಲಿ ಬೇಡಿಕೆಯಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ 279.ಈ ಪೈಕಿ, ದಿನಾಂಕ 29–11–2011ರವರೆಗೆ ಒದಗಿಸಲಾಗಿರುವ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ 238. ಬಾಕಿ ಇರುವ 41 ವಿತರಣಾ ಟ್ರಾನ್ಸ್‌ಫಾರ್ಮರ್ ಗಳನ್ನು ಅತಿ ಶೀಘ್ರದಲ್ಲಿ ಒದಗಿಸಲಾಗುವುದು.

ಕಾತ್ರಿಕೇಹಾಳ್ ಗ್ರಾಮದಲ್ಲಿ ಮಂಜೂರಾಗಿರುವ ಉಪ ವಿದ್ಯುತ್ ಸ್ಥಾವರ ಕಾಮಗಾರಿ ಪ್ರಾರಂಭ

230 (522) ಶ್ರೀ .ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) :– ಮಾನ್ಯ ಇಂಧನ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕಾತ್ರಿಕೇಹಾಳ್ ಗ್ರಾಮದಲ್ಲಿ ನೂತನ ಉಪ ವಿದ್ಯುತ್ ಸ್ಥಾವರದ ಕಾಮಗಾರಿಯನ್ನು ಇದುವರೆಗೆ ಪ್ರಾರಂಭಿಸದಿರಲು ಇರುವ ಅಡಚಣೆಗಳೇನು;

(ಆ) 2009–10ನೇ ಸಾಲಿನಲ್ಲಿ ಕಾಮಗಾರಿಯನ್ನು ಪ್ರಾರಂಭಿಸುವುದಾಗಿ ಕಳೆದ ಅಧಿವೇಶನದ ಸಮಯದಲ್ಲಿ ತಿಳಿಸಿದ್ದರೂ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣಗಳೇನು;

(ಇ) ಇನ್ನೆಷ್ಟು ದಿನಗಳಲ್ಲಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು?

ಶೋಭಾ ಕರಂದ್ಲಾಜೆ: ಮಾನ್ಯ ಇಂಧನ ಸಚಿವರು

(ಅ) (ಆ) (ಇ) ಮತ್ತು (ಈ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕಾತ್ರಿಕೇಹಾಳ್ ಗ್ರಾಮದಲ್ಲಿ ಉಪ ವಿದ್ಯುತ್ ಸ್ಥಾವರ ನಿರ್ಮಿಸಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಉದ್ದೇಶಿಸಿದ್ದು, 2011–12ನೇ ಸಾಲಿನ ವಾರ್ಷಿಕ ಕಾಮಗಾರಿಗಳ ಪಟ್ಟಿಯಲ್ಲಿ ಸೇರ್ಪಡೆಗೊಂಡಿದೆ. ಸದರಿ ವಿದ್ಯುತ್ ಸ್ಥಾವರದ ಟೆಂಡರ್ ಪ್ರಕ್ರಿಯೆಯು ಜಾರಿಯಲ್ಲಿದೆ. ಟೆಂಡರ್ ಪ್ರಕ್ರಿಯೆಯು ಪೂರ್ಣಗೊಂಡ ನಂತರ ವಿದ್ಯುತ್ ಉಪಕೇಂದ್ರದ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.